ವಿಷಯ : ದೇವನಹಳ್ಳಿ ಬಳಿ ಅಂತರ್‌ರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣ.

1413 (1962)-ಶ್ರೀ ಬಸವರಾಜ್ ಪಾಟೀಲ್ ಅಟ್ಟೂರ್ (ಬಸವಕಲ್ಯಾಣ) : ಮಾನ್ಯಭಾರಿ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಸಂಪನ್ಮೂಲಗಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ದೇವನಹಳ್ಳಿ ಬಳಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಿಸಲು ಸರ್ಕಾರ ಇದುವರೆಗೆ ಖರ್ಚು ಮಾಡಿರುವ ಹಣವೆಷ್ಟು?

ಆ) ಇದಕ್ಕಾಗಿ ಸರ್ಕಾರದಿಂದ ಹಾಗೂ ಖಾಸಗಿಯವರಿಂದ ಸ್ವಾಧೀನಪಡಿಸಿಕೊಂಡ ಜಮೀನೆಷ್ಟು?

ಇ) ಈ ಅಂತರಾಷ್ಟ್ರೀಯ ವಿಮಾನ ನಿಲ್ದಾಣವನ್ನು ನಿರ್ಮಿಸಲು ಕೇಂದ್ರ ಸರ್ಕಾರದಿಂದ ಪರವಾನಗಿ ದೊರೆತಿದೆಯೆ?

ಈ) ಈ ಅಂತರರಾಷ್ಟ್ರೀಯ ವಿಮಾನ ನಿಲ್ದಾಣವನ್ನು ಬೇರೆ ಜಾಗಕ್ಕೆ ಸ್ಥಳಾಂತರಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೆ?

ಶ್ರೀ ಆರ್. ವಿ. ದೇಶಪಾಂಡೆ (ಭಾರಿ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಸಂಪನ್ಮೂಲಗಳ ಅಭಿವೃದ್ಧಿ ಸಚಿವರು)

ಅ) ರೂ. 13,53,824-00 (ಕರ್ನಾಟಕ ರಾಜ್ಯ ಕೈಗಾರಿಕಾ ಬಂಡವಾಳ ಮತ್ತು ಅಭಿವೃದ್ಧಿ (ನಿ)ಯವರ ವತಿಯಿಂದ)

ಆ) ಸರ್ಕಾರಿ ಜಮೀನು - 1802 ಎಕರೆ 23 ಗುಂಟೆ

ಖಾಸಗಿ ಜಮೀನು - 2473 ಎಕರೆ 281/2 ಗುಂಟೆ

ಇ) ವಿಷಯವು ಕೇಂದ್ರ ಸರ್ಕಾರದ ಪರಿಶೀಲನೆಯಲ್ಲಿದೆ.

ಈ) ಇಲ್ಲ.